ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 23/03/2014

# ವಿಚಾರಣೆಗೆ ಗೈರು: ಆನಂದ್ ಸಿಂಗ್ ಪೊಲೀಸ್ ಕಸ್ಟಡಿಗೆ



**ಬೆಂಗಳೂರು:** ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ವಿಚಾರಣೆಗೆ ಗೈರು ಹಾಜರಾಗಿದ್ದ ಹೊಸಪೇಟೆ ಶಾಸಕ ಆನಂದ್ ಸಿಂಗ್ ಅವರನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಪೊಲೀಸ್ ವಶಕ್ಕೆ ನೀಡಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಹಿಂದಿನ ವಿಚಾರಣೆ ವೇಳೆ ಗೈರು ಹಾಜರಾಗಿದ್ದ ಕಾರಣ ಜಾಮೀನುರಹಿತ ವಾರೆಂಟ್ ಹೊರಡಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ವಾರೆಂಟ್ ರೀಕಾಲ್ ಮಾಡಿಕೊಳ್ಳಲು ಆನಂದ್ ಸಿಂಗ್ ಅವರು ನ್ಯಾಯಾಲಯಕ್ಕೆ ಆಗಮಿಸಿದ್ದರು.

ಅರ್ಜಿ ಸಲ್ಲಿಸಿದ ಬಳಿಕ ಶಾಸಕರನ್ನು ವಶಕ್ಕೆ ತೆಗೆದುಕೊಳ್ಳುವಂತೆ ಪೊಲೀಸರಿಗೆ ನ್ಯಾಯಾಧೀಶರು ಸೂಚಿಸಿದರು. ಮಧ್ಯಾಹ್ನ ಅರ್ಜಿ ವಿಚಾರಣೆ ನಡೆಸಿದ ಸಿಂಗ್ ಅವರಿಗೆ 1,200 ದಂಡ ವಿಧಿಸಿದ ನ್ಯಾಯಾಲಯ, ವಿಚಾರಣೆಗೆ ಸರಿಯಾಗಿ ಹಾಜರಾಗುವಂತೆ ತಿಳಿಸಿ ವಾರೆಂಟ್ ವಿಚಾರಣೆ ಪೂರ್ಣಗೊಳಿಸಿತು.

**ಸಂಬಂಧಿಗೆ ತರಾಟೆ:** ಸಿಂಗ್ ಜಾಮೀನು ಶ್ಯೂರಿಟಿಗೆ ಬಂದಿದ್ದ ಸಂಬಂಧಿ ಸಂತೋಷ್ ಕುಮಾರ್ ಎಂಬುವರನ್ನು ನ್ಯಾಯಾಧೀಶರು ತರಾಟೆಗೆ ತೆಗೆದುಕೊಂಡರು. ವಿಚಾರಣೆ ವೇಳೆ ನ್ಯಾಯಾಲಯದಿಂದ ಹೊರ ನಡೆದ ಸಂತೋಷ್ ಕುಮಾರ್ ಅವರ ವರ್ತನೆಗೆ ಬೇಸರ ವ್ಯಕ್ತಪಡಿಸಿದ ನ್ಯಾಯಾಧೀಶರು, "ಕೋರ್ಟ್‌ನಲ್ಲಿ ಗೌರವದಿಂದ ನಡೆದುಕೊಳ್ಳಿ," ಎಂದು ಸೂಚಿಸಿದರು.